4349 (5388) ಶ್ರೀ ಕಿರಣ್ ಕುಮಾರ್ ಕೆ.ಎಸ್ (ಕಳ್ಳಂಬೆಳ್ಳ) :- ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳ್ಳಂಬೆಳ್ಳ ಕ್ಷೇತ್ರ ಶಿರಾ ತಾಲ್ಲೂಕು ಯಲದಬಾಗಿಲು ಹತ್ತಿರ ಮರಳು ತೆಗೆದು ಸಾಗಾಣಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ರೀತಿ ಅಕ್ರಮವಾಗಿ ಮರಳು ತೆಗೆದು ಸಾಗಾಣಿಕೆ ಮಾಡುವುದರಿಂದ ಸೇತುವೆ ದುರ್ಬಲವಾಗುತ್ತಿರುವ ವಿಚಾರ ನಿಜವೇ;

ಇ) ಈ ವಿಚಾರದಲ್ಲಿ ಸರ್ಕಾರದ ಕ್ರಮವೇನು?

ಶ್ರೀ ಧರ್ಮಸಿಂಗ್ (ಮುಖ್ಯ ಮಂತ್ರಿಗಳು) :

ಅ) ಬಂದಿದೆ.

ಆ) ಮರಳು ಸಾಗಾಣಿಕೆಯನ್ನು ನಿಷೇಧಿಸುವ ಫಲಕವನ್ನು ಲೋಕೋಪಯೋಗಿ ಇಲಾಖೆಯಿಂದ ಹಾಕಲಾಗಿದ್ದು, ಇಲಾಖೆಯಿಂದ 1 ಕಿ.ಮೀ ವ್ಯಾಪ್ತಿಯಲ್ಲಿ ಯಾವುದೇ ಗಣಿಗಾರಿಕೆಗೆ ಅವಕಾಶ/ಪರವಾನಿಗೆ ನೀಡಿಲ್ಲ. ಆದ್ದರಿಂದ ಗಣಿಗಾರಿಕೆಯಿಂದ ಸೇತುವೆ ದುರ್ಬಲವಾಗುತ್ತದೆ ಎಂಬುದನ್ನು ಪುರಸ್ಕರಿಸಲಾಗುವುದಿಲ್ಲ.

ಇ) ಸರ್ಕಾರದಿಂದ ಯಾವುದೇ ಕ್ರಮದ ಅವಶ್ಯಕತೆ ಇಲ್ಲ.

4350 (5389) ಶ್ರೀ ಕೆ.ಎಸ್. ಕಿರಣ್‌ಕುಮಾರ್ (ಕಳ್ಳಂಬೆಳ್ಳ) :- ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳ್ಳಂಬೆಳ್ಳ ಕ್ಷೇತ್ರದ ಶಿರಾ ತಾಲ್ಲೂಕು ಬುಕ್ಕಾಪಟ್ಟಣ ಕೆರೆ ಕಾಮಗಾರಿಗೆ ಕಳೆದ 3 ವರ್ಷಗಳಿಂದ ಬಿಡುಗಡೆ ಮಾಡಿರುವ ಹಣವೆಷ್ಟು;

ಆ) ಕಾಮಗಾರಿಗೆ ಇದುವರೆವಿಗೂ ವೆಚ್ಚ ಮಾಡಿರುವ ಹಣವೆಷ್ಟು;

ಇ) ಕಾಮಗಾರಿ ಕಳಪೆಯಾಗಿ ಹಣ ದುರುಪಯೋಗವಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರು ಯಾರು? ಕಳಪೆ ಕಾಮಗಾರಿಯಾಗಿರುವ ಹಿನ್ನೆಲೆಯಲ್ಲಿ ಯಾರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು):

ಅ) ಕಳೆದ 3 ವರ್ಷಗಳಲ್ಲಿ ಈ ಕೆಳಕಂಡಂತೆ ಹಣ ಒದಗಿಸಲಾಗಿದೆ.

ರೂ.ಲಕ್ಷಗಳಲ್ಲಿ

ವರ್ಷ	ಅನುದಾನ	ವೆಚ್ಚ
2002–03	**4.00**	**0.03**
2003–04	**8.33**	**11.82**
2004–05	**12.49**	**9.05**
ಒಟ್ಟು	**24.82**	**20.90**

ಆ) ರೂ. 20.90 ಲಕ್ಷ ವೆಚ್ಚ ಮಾಡಲಾಗಿದೆ.

ಇ) ಕಳಪೆ ಕಾಮಗಾರಿಯಾಗಿದೆ ಎಂದು ದೂರು ಬಂದಿತ್ತು.

ಈ) ಶ್ರೀ ಬಿ.ಬೋಪಣ್ಣ, 1ನೇ ದರ್ಜೆ ಗುತ್ತಿಗೆದಾರರು, ಶಿರಾ. ದೂರಿನ ಬಗ್ಗೆ ತನಿಖೆ ನಡೆಸಲಾಗಿದ್ದು, ಅದರಂತೆ ಕೆಲವು ಸಣ್ಣ ಪುಟ್ಟ ದೋಷಗಳನ್ನು ಬಿಟ್ಟರೆ ಒಟ್ಟಾರೆ ಕೆಲಸವು ತೃಪ್ತಿಕರವಾಗಿದ್ದು, ಆ ಹಿನ್ನೆಲೆಯಲ್ಲಿ ಯಾರ ವಿರುದ್ಧವೂ ಕ್ರಮ ಕೈಗೊಳ್ಳುವ ಅವಶ್ಯಕತೆ ಕಂಡು ಬಂದಿಲ್ಲ.

4351 (5228) ಶ್ರೀ ಕೃಷ್ಣ ಪಾಲೇಮಾರ್ ಜೆ. (ಸುರತ್ಕಲ್) :– ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುರತ್ಕಲ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಮೀನುಗಾರಿಕಾ ಇಲಾಖೆಯ ರಸ್ತೆಗಳ ಒಟ್ಟು ಉದ್ದ ಎಷ್ಟು, ಅವುಗಳ ದುರಸ್ತಿಗಾಗಿ ಕಳೆದ ಎರಡು ವರ್ಷಗಳಲ್ಲಿ ಖರ್ಚು ಮಾಡಿದ ಹಣ ಎಷ್ಟು;

ಆ) ರಾಜ್ಯದಲ್ಲಿ ಮೀನುಗಾರಿಕಾ ಇಲಾಖೆಯವರು ಎಷ್ಟು ಕಿ.ಮೀ ಉದ್ದ ರಸ್ತೆಗಳನ್ನು ಹೊಂದಿದ್ದಾರೆ, ಮೀನುಗಾರಿಕಾ ರಸ್ತೆಗಳ ನಿರ್ಮಾಣ ಮತ್ತು ನಿರ್ವಹಣೆಗಾಗಿ ಸರಕಾರ ಮೀಸಲಿಡುವ ಖಾಯಂ ಅನುದಾನದ ಮೊತ್ತ ಎಷ್ಟು; (ಕರಾವಳಿ ಜಿಲ್ಲೆಗಳ ತಾಲ್ಲೂಕುವಾರು ಮಾಹಿತಿಗಳನ್ನು ನೀಡುವುದು);